



ಅರುಣ ಪಿ. ಭಟ್ಟ

# ವಾರಭವಿಷ್ಯ 16.07.2020ರಿಂದ 22.07.2020ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಬಹಳ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುತ್ತೀರಿ. ಉದ್ಯೋಗಸ್ಥರು ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗು ಭಿನ್ನಾಭಿಪ್ರಾಯ ತಲೆದೋರಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರಗತಿಗೆ ಹಲವು ಅಡ್ಡಿ ಆತಂಕ ಎದುರಾಗಲಿದೆ. ಶುಭದಿನ 18. ಹನುಮಾನ್ ಚಾಲಿಸ್ ಪಠಿಸಿರಿ.




ಉದ್ಯಮಿಗಳಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಜತೆಗೆ ನಿಮ್ಮ ಉತ್ಸಾಹ ಸಹ ಹೆಚ್ಚಾಗಲಿದೆ. ಶುಭದಿನ 19. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದ್ಯಾರ್ಥಿಗಳಿಗೆ ಅತ್ಯುತ್ತಮ ಅವಧಿ ಇದು. ನೌಕರರಿಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ವಾರದ ಅಂತ್ಯದ ವೇಳೆಗೆ ಸಂಪತ್ತು ದೊರೆಯಲಿದೆ. ಶುಭದಿನ 20. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಈ ವಾರದಲ್ಲಿ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಹಣಕಾಸು ಸ್ಥಿತಿ ಉತ್ತಮವಾಗಲಿದೆ. ಶುಭದಿನ 17. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ವ್ಯಾಪಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ನಿಮಗೇ ಅನುಕೂಲ. ಭೂ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನ ಪಡುತ್ತಾರೆ. ಶುಭದಿನ 22. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶ್ರಮಕ್ಕೆ ಉತ್ತಮ ಫಲಿತಾಂಶ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ಅದ್ಭುತವಾದ ಯಶಸ್ಸು. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ವಾರದ ಮಧ್ಯದಲ್ಲಿ ದಿಢೀರ್ ಆಗಿ ಖರ್ಚಿನ ಪ್ರಮಾಣ ಹೆಚ್ಚಳವಾಗಬಹುದು. ಶುಭದಿನ 20. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ತಮ್ಮ ಗೌರವ, ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಅನಾರೋಗ್ಯ ಸಮಸ್ಯೆ ಕಾಡಲಿದೆ. ಶುಭದಿನ 21. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಜ್ಞಾನ ಹಾಗೂ ಹೆಚ್ಚಿಸಿಕೊಳ್ಳಲು ವಾರದ ಆರಂಭದಲ್ಲಿ ಉತ್ತಮವಾದ ಅವಕಾಶ ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ವರ್ಚಸ್ಸು ಉಳಿಸಿಕೊಳ್ಳುತ್ತೀರಿ. ಶುಭದಿನ 21. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ 21. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 18. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.